**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 40 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:17-04-2018

**ಸುತ್ತೋಲೆ**

ವಿಷಯ: ರಿಟ್ ಅಪೀಲ್ ಸಂಖ್ಯೆ 879/2018 ಮತ್ತು 913/2018 ಹಾಗೂ ಇನ್ನಿತರೆ ರಿಟ್ ಅಪೀಲ್‌ಗಳ ಸಂಬಂಧ ( ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧದ ಅವಿಶ್ವಾಸ ನಿರ್ಣಯ ಮಂಡನೆಗೆ ಸಂಬಂಧಿಸಿದ) ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 08-03-2018 ರಂದು ನೀಡಿರುವ ಮಧ್ಯಂತರ ಆದೇಶದ ಬಗ್ಗೆ.

ಉಲ್ಲೇಖ: ರಿಟ್ ಅಪೀಲು ಸಂಖ್ಯೆ: 844/2018, 879/2018 ಹಾಗೂ ಇತರೆ ಸಂಬಂಧಿಸಿದ ಪ್ರಕರಣಗಳು.

*******

ಗ್ರಾಮ ಪಂಚಾಯತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ವಿರುದ್ಧದ ಅವಿಶ್ವಾಸ ನಿರ್ಣಯ ಮಂಡನೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯದ ಏಕಸದಸ್ಯ ಪೀಠದ ಮುಂದೆ ಸಲ್ಲಿಸಲಾಗಿದ್ದ ಹಲವಾರು ರಿಟ್ ಅರ್ಜಿಗಳಲ್ಲಿ ಮಾನ್ಯ ನ್ಯಾಯಾ ಪೀಠವು ದಿನಾಂಕ:28-02-2018 ರಂದು ನೀಡಿದ ತೀರ್ಪಿನ ವಿರುದ್ಧ ಬಾಧಿತ ರಿಟ್ ಅರ್ಜಿದಾರರು ಮಾನ್ಯ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠದ ಮುಂದೆ ರಿಟ್ ಅಪೀಲು ಅರ್ಜಿಗಳನ್ನು ಸಲ್ಲಿಸಿದ್ದರು.

ರಿಟ್ ಅಪೀಲು ಪ್ರಕರಣಗಳ ಬಗ್ಗೆ ವಿಚಾರಣೆ ನಡೆಸಿದ ಮಾನ್ಯ ವಿಭಾಗೀಯ ಪೀಠವು ಈ ಕೆಳಕಂಡಂತೆ ಮಧ್ಯಂತರ ಆದೇಶ ನೀಡಿದೆ(ಪ್ರತಿ ಲಗತ್ತಿಸಿದೆ).

"There shall be interim relief in these matters in the same terms as granted during the pendency of the writ petitions. In other word the resolution of No Confidence against the appellants shall not be given effect to as of now and the status quo as it existed prior to passing of the said Resolution shall be maintained by the concerned Grama Panchayaths until the next date.

However, it is provided that appellants shall not take any decision having financial implications as regards the Panchayath in question, but may carry out the necessary day-to-day activities"

ಮೇಲಿನ ರಿಟ್ ಅಪೀಲುಗಳಿಗೆ ಸಂಬಂಧಿಸಿದ ಗ್ರಾಮ ಪಂಚಾಯತಿಗಳು ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ನಿರ್ದೇಶನವನ್ನು ಪಾಲಿಸುವಂತೆ ತಿಳಿಸಲಾಗಿದೆ.

17/4

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1) ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು(ರಿಟ್ ಅಪೀಲುಗಳಿಗೆ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿಕೊಡುವಂತೆ ಹಾಗೂ ಅಗತ್ಯ ಮಾರ್ಗದರ್ಶನ ನೀಡುವಂತೆ ತಿಳಿಸಲಾಗಿದೆ).